155ನೇ/6 ನಿ-72 (35)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ ರವರ ನಿಯಮ 72ರ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ**

ಸರ್ಕಾರಿ ಪ್ರೌಢಶಾಲೆಗಳಲ್ಲಿ ಸ್ನಾತಕೋತ್ತರ ಪದವಿಯನ್ನು ಪಡೆದು ಹಲವಾರು ವರ್ಷಗಳಿಂದ ಸಾವಿರಾರು ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇವರು ವೃತ್ತಿಯಲ್ಲಿ ಒಂದು ಪದೋನ್ನತಿಯನ್ನು ಪಡೆಯಲು ಸಾಧ್ಯವಾಗದೆ ನಿವೃತ್ತಿಯನ್ನು ಹೊಂದುತ್ತಿದ್ದಾರೆ. ಸ್ನಾತಕೋತ್ತರ ಪದವಿ ಪಡೆದು ಪ್ರೌಢಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ 2011 ರಿಂದ ಇದುವರೆವಿಗೆ ಮುಂಬಡ್ತಿಯನ್ನು ನೀಡಿರುವುದಿಲ್ಲ. ಆದ್ದರಿಂದ ಸ್ನಾತಕೋತ್ತರ ಪದವಿ ಪಡೆದು ಪ್ರೌಢಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಇಲಾಖೆ ನಿಯಮದಂತೆ ಶೇಕಡ 25ರಷ್ಟು ಹುದ್ದೆಗಳನ್ನು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗಳಿಗೆ ನೀಡಲು ಅವಕಾಶವಿದ್ದರು ಇದುವರೆವಿಗೆ ಮುಂಬಡ್ತಿ ನೀಡದೆ ಇರುವ ವಿಷಯವನ್ನು ನಿಯಮ 72ರಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಲ್ಲಿ ಪ್ರಸ್ತಾಪಿಸುತ್ತೇನೆ.

**ಉತ್ತರ**

ಸ್ನಾತಕೋತ್ತರ ಪದವಿ ಪಡೆದು ಪ್ರೌಢಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹ ಶಿಕ್ಷಕರುಗಳಿಗೆ ಪದವಿ ಪೂರ್ವ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಕುರಿತಂತೆ 04 ವಿಭಾಗಗಳ ಪ್ರೌಢಶಾಲಾ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪಡೆದು ಒಂದೇ ಸಾಮಾನ್ಯ ಅರ್ಹತಾ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಪ್ರಸ್ತುತ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಹಂತದಲ್ಲಿ ಕ್ರಮವಹಿಸಲಾಗುತ್ತಿದ್ದು, ಶೀಘ್ರವಾಗಿ ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡಲಾಗುವುದು.

**ಇಪಿ 36 ಎಸ್‌ಒಹೆಚ್ 2025**

**(ಎಸ್. ಮಧು ಬಂಗಾರಪ್ಪ)**
**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ**
**ಸಚಿವರು.**